# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ:ಸಾವರಿನ್ ಇಂಡಸ್ಟ್ರೀಜ್ ಲಿಮಿಟೆಡ್ ರವರಿಗೆ 20.00 ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ನಿರಾಕ್ಷೇಪಣೆಯನ್ನು ನೀಡುವ ಬಗ್ಗೆ.

ಓದಲಾಗಿದೆ: 1 ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಆದೇಶ ಸಂಖ್ಯೆ: ಸಿಐ 241 ಎಸ್‌ಪಿಐ 2010 ದಿನಾಂಕ: 18.06.2010.

2 ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/04/F-94/2012-13 /07 ದಿನಾಂಕ: 01.01.2015.

* * *

**ಪ್ರಸ್ತಾವನೆ: –**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು ಮೆ: ಸಾವರಿನ್ ಡಿಸ್ಟಿಲರೀಸ್ ಲಿಮಿಟೆಡ್ ಕಂಪನಿಯವರಿಗೆ ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ತೆರದಾಳ್ ಗಾಮದಲ್ಲಿ 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯ ಜೊತೆಗೆ 30 ಮೆ.ವ್ಯಾ ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು, ಮೆ: ಸಾವರಿನ್ ಇಂಡಸ್ಟ್ರೀಸ್ ಲಿಮಿಟೆಡ್ ರವರಿಗೆ ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ತೆರದಾಳ್ ಗಾಮದಲ್ಲಿ 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯನ್ನು ಸ್ಥಾಪಿಸಿ ಅದರ ಜೊತೆಗೆ 20 ಮೆ.ವ್ಯಾ. (gross) ಸಾಮರ್ಥ್ಯದ ವಿದ್ಯುತ್ ಘಟಕವನ್ನು ಸ್ಥಾಪಿಸಲು ಮತ್ತು ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತಕ್ಕೆ ಬಳಸಿಕೊಂಡು ಋತುವಿನ ಕಾಲದಲ್ಲಿ 15 ಮೆ.ವ್ಯಾ. ಸಾಮರ್ಥ್ಯ ಹಾಗೂ ಋತುವಲ್ಲದ ಕಾಲದಲ್ಲಿ 18.20 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್‌ನ್ನು ವಿದ್ಯುತ್ ಜಾಲಕ್ಕೆ ಜೋಡಿಸಲು ಉದ್ದೇಶಿಸಿ, ಕಂಪನಿಯವರು ಸಲ್ಲಿಸಿರುವ ಪ್ರಸ್ತಾವನೆಗೆ ನಿರಾಕ್ಷೇಪಣಾ ಪತ್ರ ನೀಡಬಹುದೆಂಬ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರದ ಆದೇಶ ಸಂಖ್ಯೆ: ಇಎನ್ 06 ಎನ್‌ಸಿಇ 2015,**
**ಬೆಂಗಳೂರು, ದಿನಾಂಕ: 26.02.2015.**

ಮೆ: ಸಾವರಿನ್ ಇಂಡಸ್ಟ್ರೀಸ್ ಲಿಮಿಟೆಡ್ ರವರ ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ತೆರದಾಳ್ ಗಾಮದಲ್ಲಿ ಸ್ಥಾಪಿಸುತ್ತಿರುವ 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯ ಜೊತೆಗೆ 20 ಮೆ.ವ್ಯಾ. ಸಾಮರ್ಥ್ಯದ (gross) ಹಾಗೂ ಋತುವಿನ ಕಾಲದಲ್ಲಿ 15 ಮೆ.ವ್ಯಾ., ಋತುವಲ್ಲದ ಕಾಲದಲ್ಲಿ 18.20 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಉತ್ಪಾದನಾ ಘಟಕ ಸ್ಥಾಪಿಸಲು ಈ ಕೆಳಗಿನ ನಿಬಂಧನೆಗಳಿಗೊಳಪಟ್ಟು ಸರ್ಕಾರದ 'ನಿರಾಕ್ಷೇಪಣೆಯನ್ನು' ನೀಡಲಾಗಿದೆ.

1. ಅಭಿವೃದ್ಧಿದಾರರು ಉತ್ಪಾದಿಸುವ ವಿದ್ಯುತ್‌ನ Evacuation ಗೆ ಸಂಬಂಧಿಸಿದಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು;

---2)

2. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅಂದರೆ, ಅರಣ್ಯ/ಕಂದಾಯ ಇಲಾಖೆ ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
3. ಅಭಿವೃದ್ಧಿದಾರರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮಾರಾಟ ಮಾಡುವ ಕುರಿತು ಸಂಬಂಧಿಸಿದ ಎಸ್ಕಾಂನೊಂದಿಗೆ ವಿದ್ಯುತ್ ಖರೀದಿ ಒಪ್ಪಂದ (ಪಿಪಿಎ) ಅಥವಾ ವೀಲಿಂಗ್ ಆಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ;
4. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ಕೆ.ಆರ್.ಇ.ಡಿ.ಎಲ್.ಗೆ ಶುಲ್ಕ ಪಾವತಿಸತಕ್ಕದ್ದು;

ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎-22034674.

<u>ಇವರಿಗೆ:</u>
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

<u>ಪ್ರತಿ:</u>

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು-1.
2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ.
8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
9 ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಭವನ, ಚರ್ಚ್‌ಸ್ಟ್ರೀಟ್ ರಸ್ತೆ, ಬೆಂಗಳೂರು-01.
10 ಮೆ: ಸಾವರಿನ್ ಇಂಡಸ್ಟ್ರೀಸ್ ಲಿಮಿಟೆಡ್, 2ನೇ ಮಹಡಿ, ತ್ರಿವೇಣಿ ಕಾಂಪ್ಲೆಕ್ಸ್, ಯಾದವಾಡ ರೋಡ್, ಮುಧೋಳ್ ಕರ್ನಾಟಕ-587 313.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.